# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 443 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 10.07.2023 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಮಂಡ್ಯ, ಹಾಸನ ಮತ್ತು ಚಾಮರಾಜನಗರ ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ಒಳಪಡುವ ಕಾಲೇಜುಗಳ ಸಂಖ್ಯೆ ಎಷ್ಟು; (ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳ ವಿವರ ಜಿಲ್ಲಾವಾರು ಮಾಹಿತಿ ನೀಡುವುದು) | 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ, ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿರುವ ಸ್ನಾತಕೋತ್ತರ ಕೇಂದ್ರಗಳನ್ನು 07 ನೂತನ ವಿಶ್ವವಿದ್ಯಾಲಯಗಳನ್ನಾಗಿ ಸ್ಥಾಪಿಸಿ, ಪ್ರಾರಂಭಿಸಲಾಗಿದೆ ಮತ್ತು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವಾಗಿರುವ ಮಂಡ್ಯ ವಿಶ್ವವಿದ್ಯಾಲಯವನ್ನು ಸಂಯೋಜಿತ ವಿಶ್ವವಿದ್ಯಾಲಯವನ್ನಾಗಿ ಪರಿವರ್ತಿಸಲಾಗಿದೆ.<br><br>ಸದರಿ ವಿಶ್ವವಿದ್ಯಾಲಯಗಳು ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ರೂ.2.00 ಕೋಟಿಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸುತ್ತಿವೆ.<br><br>ಮಾತೃ ವಿಶ್ವವಿದ್ಯಾಲಯವಾದ ಮೈಸೂರು ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯವಿರುವ ಹುದ್ದೆಗಳನ್ನು ಬಳಸಿಕೊಂಡು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೆ ಮಂಡ್ಯ, ಹಾಸನ ಮತ್ತು ಚಾಮರಾಜನಗರ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸಲಿದ್ದು, ಈ ಉದ್ದೇಶಕ್ಕಾಗಿ ಯಾವುದೇ ಹೊಸ ಹುದ್ದೆಗಳನ್ನು ಸೃಜಿಸಲು ಅವಕಾಶವಿರುವುದಿಲ್ಲ.<br><br>ಮುಂದುವರೆದು, ಈ ವಿಶ್ವವಿದ್ಯಾಲಯಗಳಿಗೆ ಮಾತೃ ವಿಶ್ವವಿದ್ಯಾಲಯವಾದ ಮೈಸೂರು ವಿಶ್ವವಿದ್ಯಾಲಯದಿಂದ ಚರಾಸ್ತಿ, ಸ್ಥಿರಾಸ್ತಿ, ಬೋಧಕ-ಬೋಧಕೇತರ ಹುದ್ದೆಗಳು, ಸಂಯೋಜಿತ ಕಾಲೇಜುಗಳು, ಸರ್ಕಾರಿ ಕಾಲೇಜುಗಳ ಹಂಚಿಕೆ ಕುರಿತಂತೆ ಪರಿಶೀಲಿಸಿ ಸಮಗ್ರ ವರದಿ ನೀಡಲು ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿದ್ದು, ಸದರಿ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತದೆ. ವರದಿಯು ಪರಿಶೀಲನೆಯಲ್ಲಿದೆ. ಮುಂದಿನ ದಿನಗಳಲ್ಲಿ ಪ್ರಶ್ನೆಯಲ್ಲಿರುವ ವಿವಿಧ ಅಂಶಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಲಾಗುವುದು. |
| (ಆ) | ಸದರಿ ವಿಶ್ವವಿದ್ಯಾಲಯಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ, ಖಾಲಿ ಉಳಿದಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು; | |
| (ಇ) | ಈ ಮೇಲಿನ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾಲೇಜು ಶಿಕ್ಷಣ ಇಲಾಖೆಗೆ ಸೇರಿದ ಬೋಧಕರ ಪೈಕಿ ಎಷ್ಟು ಬೋಧಕರು ತಮ್ಮ ಮಾತೃ ಇಲಾಖೆಗೆ ವಾಪಸ್ಸು ಆಗಿದ್ದಾರೆ; ಎಷ್ಟು ಮಂದಿ ಉಳಿದಿದ್ದಾರೆ; ಎಷ್ಟು ಮಂದಿ ಹೋಗಲು ಇಚ್ಛಿಸಿದ್ದಾರೆ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು) | |
| (ಈ) | ಕಾಲೇಜು ಶಿಕ್ಷಣ ಇಲಾಖೆಗೆ ಸೇರಿದ ಬೋಧಕರ ತಮ್ಮ ಮಾತೃ ಇಲಾಖೆಗೆ ವಾಪಸ್ಸಾದರೆ ಶೈಕ್ಷಣಿಕ ಚಟುವಟಿಕೆಗೆ ತೊಂದರೆ ಆಗದಂತೆ ವಿದ್ಯಾರ್ಥಿಗಳಿಗೆ ಯಾವ ರೀತಿ ಅನುಕೂಲ ಮಾಡಿಕೊಡಲಾಗುವುದು? (ವಿವರ ನೀಡುವುದು) | |
| (ಉ) | ಸದರಿ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕರ ಕಾರ್ಯಭಾರಕ್ಕೆ ಅನುಸಾರವಾಗಿ ಅತಿಥಿ ಉಪನ್ಯಾಸಕರನ್ನು ವಿಶ್ವವಿದ್ಯಾಲಯಗಳಿಂದಲೇ ನೇಮಿಸಿಕೊಳ್ಳಲಾಗುವುದೆ; ಅಥವಾ ಕಾಲೇಜು ಶಿಕ್ಷಣ ಇಲಾಖೆ ಮೂಲಕ ನಿಯುಕ್ತಿಗೊಳಿಸಲಾದ ಅತಿಥಿ ಉಪನ್ಯಾಸಕರನ್ನು ಬಳಸಿಕೊಳ್ಳಲಾಗುವುದೆ; (ವಿವರ ನೀಡುವುದು) | |
| (ಊ) | ಒಂದು ವೇಳೆ ವಿಶ್ವವಿದ್ಯಾಲಯಗಳಿಂದಲೇ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡರೆ ಯುಜಿಸಿ ನಿಯಮಾವಳಿಗಳ ಪ್ರಕಾರ ವೇತನ ಪಾವತಿಸಲಾಗುವುದೇ; (ಮಾಹಿತಿ ನೀಡುವುದು) | |
| (ಋ) | ಸರ್ಕಾರ ಸದರಿ ವಿಶ್ವವಿದ್ಯಾಲಯಗಳಿಗೆ ಅನುದಾ ನೀಡುವುದೆ; ಅಥವಾ ಆಡಳಿತಾತ್ಮಕ, ಅಭಿವೃದ್ಧಿ ಮತ್ತು ಇತರೆ ವೆಚ್ಚಗಳಿಗಾಗಿ ಸ್ವಂತ ಸಂಪನ್ಮೂಲವನ್ನೇ ಹೊಸ ವಿಶ್ವವಿದ್ಯಾಲಯಗಳು ಆಶ್ರಯಿಸಬೇಕೆ; (ವಿವರ ನೀಡುವುದು) | |
| ಎ) | ಹೊಸ ವಿಶ್ವವಿದ್ಯಾಲಯಗಳಲ್ಲಿ ಸಾಂಪ್ರದಾಯಿಕ ಶಿಕ್ಷಣದ ಜೊತೆಗೆ ತಾಂತ್ರಿಕ ಶಿಕ್ಷಣವನ್ನು ಒಳಗೊಂಡ ಕೋರ್ಸ್‌ಗಳ ಸಂಯೋಜನೆಯನ್ನು ಸೇರ್ಪಡೆಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ; | |

ಸಂಖ್ಯೆ: ಇಡಿ 115 ಯುಎನ್ಇ 2023

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು